**PCR 92/2026**
**PW-1**

ದಿಃ 06-03-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

<u>ಮುಖ್ಯ ವಿಚಾರಣೆಃ ಶ್ರೀ. ಎಸ್.ಕೆ.ಎನ್. ವಕೀಲರಿಂದಃ</u>

ನಾನು ಈ ಪ್ರಕರಣದಲ್ಲಿ ಪಿರ್ಯಾದಿ ಸಂಸ್ಥೆಯ ಅಧಿಕೃತ ಸಿಬ್ಬಂದಿಯಾಗಿರುತ್ತೇನೆ. ನಾನು ನನ್ನ ಪ್ರಮಾಣೀಕರಿಸಿದ ಹೇಳಿಕೆಯ ಸಲುವಾಗಿ ಒಂದು ಶಪಥ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನನ್ನ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಕೋರುತ್ತೇನೆ. ಶಪಥ ಪತ್ರದಲ್ಲಿ ಬರೆಸಿದ ಎಲ್ಲಾ ವಿಷಯಗಳು ಸತ್ಯ ಮತ್ತು ಸರಿ ಇದ್ದು, ಅದನ್ನು ಓದಿ ತಿಳಿದುಕೊಂಡು ಸರಿ ಇರುತ್ತದೆ ಎಂದು ಸಹಿ ಮಾಡಿರುತ್ತೇನೆ. ಪಿಡಬ್ಲೂ-1 ಎಂದು ವಿಚಾರಿಸಲಾಯಿತು.

2. ಆರೋಪಿ ನೀಡಿದ ಮೂಲ ಚೆಕ್ಕನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕಿನವರು ನೀಡಿದ ಹಿಂಬರಹ ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು, ವಕೀಲರ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, ಅಂಚೆ ಕಚೇರಿಯ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು, ಸಂಸ್ಥೆಯ ನಡಾವಳಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ನನ್ನ ಪಿರ್ಯಾದನ್ನು ಪರಿಗಣಿಸಿ ಆರೋಪಿಯ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪ್ರಾರ್ಥಿಸುತ್ತೇನೆ.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರ.ಸಿ.ನ್ಯಾ ಮತ್ತು ಪ್ರ.ದ.ನ್ಯಾದಂ., ಕಾರ್ಕಳ